# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 137 | Pages. 2 | Date: 05-05-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 137 - ಪುಟಗಳು : 2 | 05-05-2026 | ಮಂಗಳವಾರ | Ph: 8762954248 | ದರ : ₹1


## ಅರಸೀಕೆರೆಗೆ ಶೀಘ್ರ ಎತ್ತಿನಹೊಳೆ ನೀರು: ಭರವಸೆ

### ನಾಗೇನಹಳ್ಳಿಯಲ್ಲಿ ಪೈಪ್‌ಲೈನ್ ಕಾಮಗಾರಿಗೆ ಭೂಮಿಪೂಜೆ | ಕೋಡಿಶ್ರೀ ಸಾನ್ನಿಧ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಎತ್ತಿನಹೊಳೆ ಯೋಜನೆಗೆ ಇದ್ದ ಕಾನೂನು ತೊಡಕುಗಳು ನಿವಾರಣೆಯಾಗಿದ್ದು ಶೀಘ್ರದಲ್ಲೇ ತಾಲ್ಲೂಕಿನ ಕೆರೆಕಟ್ಟೆಗಳಿಗೆ ನೀರು ಹರಿಯಲಿದೆ ಎಂದು ಶಾಸಕ ಕೆ.ಎಂ.ಶಿವಲಿಂಗೇಗೌಡ ಭರವಸೆ ನೀಡಿದರು.



ತಾಲ್ಲೂಕಿನ ನಾಗೇನಹಳ್ಳಿ ರಂಗನಾಥ ಸ್ವಾಮಿ ದೇವಾಲಯದ ಸಮೀಪ ಸ್ಥಗಿತಗೊಂಡಿದ್ದ ಎತ್ತಿನಹೊಳೆ ಯೋಜನೆ ಪೈಪ್‌ಲೈನ್ ಕಾಮಗಾರಿಗೆ ಸೋಮವಾರ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಕರ್ನಾಟಕದ ಹತ್ತಾರು ಜಿಲ್ಲೆಯ ಜನರ ದಾಹ ನಿಗಿಸಲು ಎತ್ತಿನಹೊಳೆ ಯೋಜನೆ ಸಂಜೀವಿನಿಯಾಗಿದೆ. ರಾಜಕೀಯವಾಗಿ ಪರ-ವಿರೋಧ ಹೇಳಿಕೆಗಳು ಕಾಮಗಾರಿಗೆ ಎದುರಾದ ಅಡ್ಡಿ ಆತಂಕಗಳೆಲ್ಲ ನಿವಾರಣೆಯಾಗಿದೆ. ಕೆಲವೇ ದಿನಗಳಲ್ಲಿ ತಾಲ್ಲೂಕಿನ ಕೆರೆ ಕಟ್ಟೆಗಳಲ್ಲಿ ನೇತ್ರಾವತಿ ಕೊಳ್ಳದ ನೀರು ತುಂಬಲಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಹಾರನಹಳ್ಳಿ ಕೋಡಿಮಠದ ಶ್ರೀ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಮಾತನಾಡಿ, ಹೆಳವನ ಮನೆ ಬಾಗಿಲಿಗೆ ಹೊಳೆ ಬಂತು ಎಂಬಂತೆ ಬಯಲು ಸೀಮೆ ಅರಸೀಕೆರೆ ತಾಲ್ಲೂಕಿಗೆ ಎತ್ತಿನಹೊಳೆ ಯೋಜನೆ ವರದಾನವಾಗಿದೆ. ಇದು ಶಿವಲಿಂಗೇಗೌಡರ ಅವಿರತ ಹೋರಾಟದ ಫಲ.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಕನ್ನಂಬಾಡಿ ಕಟ್ಟೆ ಕಟ್ಟಿದಾಗ ಅವರಿಗೆ ಭೂಪ, ಮನೆ ಮನೆಗೆ ದೀಪ ಎಂದು ಕರೆಯುತ್ತಿದ್ದರು. ಹಾಗೆಯೇ ಶಿವಲಿಂಗೇಗೌಡರ ಹೆಸರು ತಾಲ್ಲೂಕಿನಲ್ಲಿ ಶಾಶ್ವತವಾಗಿ ಇರಲಿದೆ ಎಂದರು.

ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಧರ್ಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ ಎರಡು ನದಿ ಹರಿದರೂ ನೀರಾವರಿ ಸೌಲಭ್ಯ ಇರಲಿಲ್ಲ. ಕುಡಿಯುವ ನೀರಿಗೂ ಪರದಾಡ ಪರಿಸ್ಥಿತಿ ಇತ್ತು.

ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರ ಪ್ರಯತ್ನ ಹಾಗು ದೂರದೃಷ್ಟಿಯ ಪರಿಣಾಮ ಮುಂದಿನ 50 ವರ್ಷ ತಾಲ್ಲೂಕಿನ ಜನರನ್ನು ನೀರಿನ ಸಮಸ್ಯೆ ಕಾಡದಂತೆ ವ್ಯವಸ್ಥೆ ಮಾಡಿದ್ದಾರೆ.

ಶಿವಲಿಂಗೇಗೌಡರು ಬರದ ನಾಡಿನ ಭಗೀರಥರಾಗಿದ್ದಾರೆ ಎಂದರು.

ಕೆಪಿಸಿಸಿ ಜಿಲ್ಲಾ ಕಾರ್ಯಾಧ್ಯಕ್ಷ ಜಿ.ಬಿ.ಶಶಿಧರ್, ಕಾಂಗ್ರೆಸ್ ಮುಖಂಡರಾದ ಅಡವಿಸ್ವಾಮಿ, ಶಿವಶಂಕರ್, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿಳಿಚೌಡಯ್ಯ, ಮಾಜಿ ಸದಸ್ಯ ಸ್ವಾಮಿ, ಎತ್ತಿನಹೊಳೆ ಎಇಇ ಆನಂದ್, ದೇವರಾಜ್ ಮೊದಲಾದವರಿದ್ದರು.

### ಸತತ ಹೋರಾಟಕ್ಕೆ ಸಿಕ್ಕ ಫಲ

ತಾಲ್ಲೂಕಿನ ಬಯಲು ಸೀಮೆ ಭಾಗಕ್ಕೆ ನೀರು ಕಲ್ಪಿಸುವ ಮಹತ್ವಕಾಂಕ್ಷಿ ಎತ್ತಿನಹೊಳೆ ಯೋಜನೆಗೆ ಇದ್ದ ಅಡ್ಡಿ ನಿವಾರಣೆಯಾಗಿದ್ದು, ನೇತ್ರಾವತಿ ಕೊಳ್ಳದ ನೀರು ತಾಲ್ಲೂಕಿನ ಕೆರೆ ಕಟ್ಟೆಗಳನ್ನು ತಲುಪುವ ದಾರಿ ಕೊನೆಗೂ ಸುಗಮವಾಗಿದೆ.

ಅರಣ್ಯ ಇಲಾಖೆಗೆ ಸೇರಿದ ಐದಳ್ಳ ಕಾವಲು ಮೂಲಕ ಹಾದು ಬರಬೇಕಿದ್ದ ಕಾಮಗಾರಿಗೆ ಕಾನೂನಾತ್ಮಕ ಅಡ್ಡಿ ಎದುರಾಗಿತ್ತು. ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರ ಹೋರಾಟ ಫಲ, ರಾಜ್ಯ ಹಾಗು ಕೇಂದ್ರ ಅರಣ್ಯ ಇಲಾಖೆಯೊಂದಿಗೆ ಪತ್ರ ವ್ಯವಹಾರ ನಡೆಸಿ ಅನುಮತಿ ಪಡೆಯುವಲ್ಲಿ ಯಶಸ್ವಿಯಾಗಿರುವುದರಿಂದ ಮಧ್ಯ ಕರ್ನಾಟಕದ ಹತ್ತಾರು ಜಿಲ್ಲೆಗಳ ಜನರ ನೀರಿನ ದಾಹ ನೀಗಿಸುವ ಮಹತ್ವಕಾಂಕ್ಷಿ ಯೋಜನೆಗೆ ಹಸಿರು ನಿಶಾನೆ ಸಿಕ್ಕಿದೆ.

## ಪಿಡಿಒ ಕಾರ್ಯದೊತ್ತಡ ಕಡಿಮೆ ಮಾಡಲು ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ಮೇಲಿನ ಕೆಲಸದ ಒತ್ತಡ, ಬಾಕಿ ವೇತನ ಬಿಡುಗಡೆ ವಿಳಂಬ ಸೇರಿ ಪಿಡಿಒಗಳ ಸೇವಾ ರಕ್ಷಣೆಗೆ ಆಗ್ರಹಿಸಿ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದಿಂದ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.



ಸಂಘದ ಜಿಲ್ಲಾಧ್ಯಕ್ಷ ಗಿರೀಶ್ ಮಾತನಾಡಿ, ಇತ್ತೀಚೆಗೆ ಗದಗ ಜಿಲ್ಲೆಯ ರೋಣ ತಾಲೂಕಿನಲ್ಲಿ ಪಿಡಿಒ ಮುಕ್ತಮಹುಸೇನ ಕರಡಿಗುಡ್ಡ ಎಂಬುವವರು ಅತಿಯಾದ ಕೆಲಸದ ಒತ್ತಡದ ಜೊತೆಗೆ ಲೋಕಾಯುಕ್ತ ತನಿಖೆ ಹಾಗೂ ವೇತನವಿಲ್ಲದೆ ಬೇಸತ್ತು ಆತ್ಮಹತ್ಯೆಗೆ ಶರಣಾಗಿದ್ದರು. ದಾರವಾಡದಲ್ಲಿ ಕಾರ್ಯನಿರ್ವಹಿಸುತ್ತಿದ್ದ ವೇಳೆ ಅಮಾನತುಗೊಂಡು ಸುಮಾರು 8 ತಿಂಗಳುಗಳ ಕಾಲ ವೇತನವಿಲ್ಲದೆ ಆರ್ಥಿಕ ಸಂಕಷ್ಟಕ್ಕೊಳಗಾಗಿದ್ದರು. ಅಲ್ಲದೆ ಗದಗದ ಅಸೂಟಿ ಹಾಗೂ ಕೊತಬಾಲ ಎಂಬ ಎರಡು ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಯಾಗಿ ಕೆಲಸ ನಿರ್ವಹಿಸುವ ವೇಳೆ ಅತಿಯಾದ ಕೆಲಸದ ಒತ್ತಡದಿಂದ ಬೇಸತ್ತು ಆತ್ಮಹತ್ಯೆಗ ಶರಣಾದರು ಎಂದರು.

ಈ ರೀತಿಯ ಘಟನೆ ಗ್ರಾಮೀಣಾಭಿವೃದ್ಧಿಯ ಆಧಾರ ಸ್ತಂಬವಾಗಿರುವ ಪಿಡಿಒಗಳು ತೀವ್ರವಾದ ಕೆಲಸದ ಒತ್ತಡದಿಂದ ನಲುಗುತ್ತಿದ್ದಾರೆ. ನಿರಂತರ ಒತ್ತಡ ಹಾಗೂ ಅಕಾಲಿಕ ಸಾವಿನ ಕುರಿತು ಅಧ್ಯಯನ ಮಾಡಲು ಕಳೆದ ಒಂದು ವರ್ಷದ ಹಿಂದೆಯೇ ಮೀನಾಕ್ಷಿ ಸುಂದರಂ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿತ್ತು. ಆದರೆ ಈ ವರೆಗೂ ಸರ್ಕಾರಕ್ಕೆ ವರದಿ ಸಲ್ಲಿಯಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಆದ್ದರಿಂದ ಆತ್ಮಹತ್ಯೆಗೆ ಶರಣಾದ ಪಿಡಿಒ ಮುಕ್ತಮಹುಸೇನ ಕರಡಿಗುಡ್ಡ ಅವರ ಆತ್ಮಹತ್ಯೆಗೆ ಪ್ರಕರಣದ ಉನ್ನತ ಮಟ್ಟದ ತನಿಖೆ ನಡೆಸಿ ಅವರ ಕುಟುಂಬಕ್ಕೆ ಬಾಕಿ ವೇತನ, ಆರ್ಥಿಕ ಸೌಲಭ್ಯ ತಕ್ಷಣ ಒದಗಿಸಿ ಕುಟುಂಬದ ಓರ್ವ ಸದಸ್ಯರಿಗೆ ಅನುಕಂಪದ ಆದಾರದ ಸರ್ಕಾರಿ ಉದ್ಯೋಗ ನೀಡುವಂತೆ ಮನವಿ ಮಾಡಿದರು.

ಆಯುಕ್ತಾಲಯ, ಜಿ.ಪಂ. ತಾ.ಪಂ ಕಚೇರಿಗಳಲ್ಲಿನ ಸಿಬ್ಬಂದಿಗೆ ಕಡ್ಡಾಯ ವರ್ಗಾವಣೆ ಜಾರಿಗೊಳಿಸಬೇಕು. ಹೆಚ್ಚುವರಿ ಹೊರೆ ತಪ್ಪಿಸಿ ಒತ್ತಡ ರಹಿತ ಕೆಲಸ ಮಾಡುವ ವಾತಾವರಣ ಸೃಷ್ಟಿಸಬೇಕು. ಕ್ಷುಲ್ಲಕ ಕಾರಣಕ್ಕೆ ಅಮಾನತು ತಪ್ಪಿಸುವುದರ ಜೊತೆಗೆ ಯಾವುದೇ ವಿಚಾರಣೆಗೆ ಒಳಗಾದರೆ ನಿರ್ದಿಷ್ಟ ಕಾಲಮಿತಿಯೊಳಗೆ ತನಖೆ ನಡೆಸಿ ಅಮಾನತು ತೆರವು ಮಾಡಬೇಕು ಎಂದು ಆಗ್ರಹಿಸಿದರು.

ಉಪಾಧ್ಯಕ್ಷ ಪ್ರಕಾಶ್, ಸಂಘಟನಾ ಕಾರ್ಯದರ್ಶಿ ಸುರೇಶ್, ಖಜಾಂಚಿ ಹರೀಶ್ ಇತರರಿದ್ದರು.

## ಹಾಸನದಲ್ಲಿ ಮತ್ತೊಂದು ಫುಡ್ ಕೋರ್ಟ್: ಭೂಮಿಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಹೊಸ ಬಸ್ ನಿಲ್ದಾಣದ ಎದುರು ಫುಡ್ ಕೋರ್ಟ್ ನಿರ್ಮಾಣಕ್ಕೆ ಶಾಸಕ ಹೆಚ್.ಪಿ.ಸ್ವರೂಪ್ ಅವರು ಮುಂದಾಗಿದ್ದು ಸೋಮವಾರ ಭೂಮಿಪೂಜೆ ನೆರವೇರಿಸಿದರು.

ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ 35 ಲಕ್ಷ ರೂ., ಸಿಎಂಐಡಿಪಿ ಅನುದಾನದಡಿ 29 ಲಕ್ಷ ರೂ. ಹಾಗೂ ಶಾಸಕರ ಸ್ಥಳೀಯ ಕ್ಷೇತ್ರಾಭಿವೃದ್ಧಿ ಯೋಜನೆಯಡಿ 5 ಲಕ್ಷ ರೂ. ಸೇರಿ 69 ಲಕ್ಷ ರೂ. ವೆಚ್ಚದ ಕಾಮಗಾರಿ ಇದಾಗಿದೆ.

ಹೊರ ಜಿಲ್ಲೆ ಹಾಗೂ ತಾಲ್ಲೂಕುಗಳಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಗುಣಮಟ್ಟದ ಆಹಾರ ಕಲ್ಪಿಸಬೇಕು. ಸ್ಥಳೀಯ ವ್ಯಾಪಾರಿಗಳಿಗೆ ಅನುಕೂಲ ಮಾಡಿಕೊಡಬೇಕೆಂಬ ಗುರಿ ಹಾಕಿಕೊಳ್ಳಲಾಗಿತ್ತು. ಅದರಂತೆ ಫುಡ್ ಕೋರ್ಟ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಶಾಸಕ ಹೆಚ್.ಪಿ.ಸ್ವರೂಪ್ ತಿಳಿಸಿದರು.

ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳ್ಳಲಿದೆ. ಗುಣಮಟ್ಟದ ಆಹಾರ ಒದಗಿಸುವುದು ವ್ಯಾಪಾರಿಗಳ ಆದ್ಯತೆಯಾಗಬೇಕು. ಸಾರ್ವಜನಿಕರು ಹೋಟೆಲ್‌ಗಳನ್ನು ಅರಸಿ ದೂರದ ಹೋಟೆಲ್‌ಗಳಿಗೆ ಅಲೆಯುವುದನ್ನು ತಪ್ಪಿಸಲು ಇಲ್ಲಿ ಫುಡ್ ಕೋರ್ಟ್ ನಿರ್ಮಿಸಲಾಗುತ್ತಿದೆ ಎಂದರು. ಸ್ಥಳೀಯ ಮುಖಂಡರು, ಕಾರ್ಯಕರ್ತರು, ವ್ಯಾಪಾರಿಗಳು ಇದ್ದರು.

## ಎಂಟಿಇಎಸ್ ಗದ್ದುಗೆ ಗುದ್ದಾಟ: ಹೋರಾಟದ ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿ ಅಧಿಕಾರ ಯಾರು ನಡೆಸಬೇಕೆಂದು ಹೈಕೋರ್ಟ್ ಸ್ಪಷ್ಟಪಡಿಸಿಲ್ಲವಾದರೂ ಮಾಜಿ ಶಾಸಕ ಬಿ.ಆರ್.ಗುರುದೇವ್ ತಾವೇ ಅಧ್ಯಕ್ಷರೆಂದು ಹೇಳಿಕೊಳ್ಳುತ್ತಿದ್ದಾರೆ. ನ್ಯಾಯಾಲಯ ಆದೇಶ ಬರುವ ವರೆಗೆ ಯಥಾಸ್ಥಿತಿ ಕಾಪಾಡಬೇಕು ಎಂದು ಸಮಿತಿ ನಿರ್ದೇಶಕ ಜಗದೀಶ್ ಚೌಡುವಳ್ಳಿ ಆಗ್ರಹಿಸಿದರು.




ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿ, ಗುರುದೇವ್, ಕುಮಾರ್ ಹಾಗೂ ಎಸ್.ಜಿ.ಶ್ರೀಧರ್ ತಾವೇ ಅಧ್ಯಕ್ಷರು, ಕಾರ್ಯದರ್ಶಿ, ಖಜಾಂಚಿ ಎಂದು ಹೇಳಿಕೊಂಡಿದ್ದಾರೆ. ಅಧಿಕಾರದಲ್ಲಿ ಮುಂದುವರಿಯಲು ತಮಗೆ ನ್ಯಾಯಾಲಯ ಆದೇಶ ನೀಡಿದೆ ಎಂದು ಸ್ಟೇಟಸ್ ಪ್ರತಿ ತೋರಿಸಿ ಅದನ್ನೇ ಆದೇಶವೆಂದು ಸುಳ್ಳು ಹೇಳಿ ಕಾನೂನು ಬಾಹಿರವಾಗಿ ಅಧಿಕಾರ ಸ್ವೀಕರಿಸಿದ್ದಾರೆ. ಗುರುದೇವ್ ಅವರು ಸಾಕಷ್ಟು ಅಕ್ರಮ ಎಸಗಿದ್ದು ಕಾನೂನು ಹೋರಾಟ ಮುಂದುವರಿಯಲಿದೆ ಎಂದರು.

ಏ. 29ರ ಹೈಕೋರ್ಟ್‌ನಲ್ಲಿ ವಿಚಾರಣೆ ಮುಗಿದ ಬಳಿಕ ನ್ಯಾಯಾಧೀಶರು ಆದೇಶವನ್ನು ಪ್ರಕಟಿಸಬೇಕಿತ್ತು. ನಾವು ಸಲ್ಲಿಸಿದ್ದ ಜಿಲ್ಲಾ ನ್ಯಾಯಾಲಯದ ತಡೆಯಾಜ್ಞೆಯನ್ನು ವಜಾ ಮಾಡಿದ್ದೇವೆ ಎಂದು ನ್ಯಾಯಾಧೀಶರು ಹೇಳಿದಾಗ ನಮ್ಮ ವಕೀಲರು ಸುಪ್ರೀಂ ಕೋರ್ಟ್ ಮೆಟ್ಟಿಲೇರಲು ನಾಲ್ಕು ವಾರಗಳ ಸಮಯಾವಕಾಶ ಬೇಕೆಂದು ಕೇಳಿದ್ದರು. ಅದಕ್ಕೆ ನ್ಯಾಯಾಧೀಶರು ಅವಕಾಶ ನೀಡದೆ ತಮ್ಮ ಆದೇಶ ಪ್ರತಿ ತಿದ್ದುಪಡಿ ಆಗಬೇಕು. ಅದಾದ ಬಳಿಕ ಮುಂದಿನ ಕ್ರಮ ಕೈಗೊಳ್ಳಬಹುದು. ಅಲ್ಲಿವರೆಗೆ ಯಾರೂ ಅಧಿಕಾರದಲ್ಲಿ ಮುಂದುವರಿಯುವಂತಿಲ್ಲವೆಂದು ಹೇಳಿದ್ದಾರೆ. ನ್ಯಾಯಾಧೀಶರು ಇಲ್ಲಿವರೆಗೆ ಅಂತಿಮ ಆದೇಶ ಪ್ರಕಟಿಸಿಲ್ಲ. ಆದರೆ, ಬಿ.ಆರ್.ಗುರುದೇವ್ ಹಾಗು ಇತರರು ತಮಗೆ ಗೆಲುವು ಸಿಕ್ಕಿದೆ ಎಂದು ಸಂಭ್ರಮಿಸುವ ಮೂಲಕ ಕಾನೂನು ಉಲ್ಲಂಘಿಸಿದ್ದಾರೆಂದು ಆರೋಪಿಸಿದರು.

ಸಂಸ್ಥೆಯ ವ್ಯಾಪ್ತಿಗೆ ಬರುವ ಕಾಲೇಜುಗಳಿಗೆ ಭೇಟಿ ನೀಡಿ ತಾವೇ ಅಧಿಕಾರ ವಹಿಸಿಕೊಂಡಿರುವುದಾಗಿ ಪತ್ರ ನೀಡಿರುವುದಲ್ಲದೆ, ಸಂಸ್ಥೆಯ ಬ್ಯಾಂಕ್ ಖಾತೆಗಳಿಗೂ ಮುಂದಿನ ಹಣಕಾಸು ವ್ಯವಹಾರಗಳಿಗೆ ತಮ್ಮ ಸಹಿ ಬಳಸಬೇಕೆಂದು ನೋಟಿಸ್ ನೀಡಿದ್ದಾರೆ ಎಂದರು.

ನ್ಯಾಯಾಲಯದ ಮುಂದೆ ಎಲ್ಲರೂ ಸಮಾನರು. ನಮ್ಮ ವಿರುದ್ಧ ತೀರ್ಪು ಬಂದಿದ್ದರೆ ಅದನ್ನು ಗೌರವಿಸಿ ಅಧಿಕಾರ ಹಸ್ತಾಂತರಿಸಲು ಸಿದ್ಧರಿದ್ದೇವೆ. ಆದರೆ ಅಧಿಕೃತ ಆದೇಶ ಹೊರಬರುವ ಮುನ್ನವೇ ಆತುರದಲ್ಲಿ ಅಧಿಕಾರ ವಹಿಸಿಕೊಳ್ಳುವುದು ಸರಿಯಲ್ಲ ಎಂದು ಹೇಳಿದರು.

ಎಂಟಿಇಎಸ್ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಮಾತನಾಡಿದರು. ಖಜಾಂಚಿ ಹೆಚ್.ಡಿ.ಪಾರ್ಶ್ವನಾಥ್, ನಿರ್ದೇಶಕರಾದ ನಾಗರಾಜ್ ಜೈನ್, ಸುರೇಶ್, ಜಿ.ಎಲ್.ಮುದ್ದೇಗೌಡ ಹಾಜರಿದ್ದರು.

## ಅನುಮಾನದಿಂದ ಪ್ರೇಯಸಿ ಕೊಂದವನಿಗೆ ಜೀವಾವಧಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಅನುಮಾನದಿಂದ ಪ್ರೀತಿಸುತ್ತಿದ್ದ ಯುವತಿಯನ್ನೇ ಕೊಲೆ ಮಾಡಿದ್ದ ಅಪರಾಧಿಗೆ ಜೀವಾವಧಿ ಹಾಗೂ 20 ಸಾವಿರ ರೂ. ದಂಡ ವಿಧಿಸಿ ಜಿಲ್ಲಾ ನ್ಯಾಯಾಲಯ ಆದೇಶಿಸಿದೆ.

ಸಕಲೇಶಪುರ ತಾಲ್ಲೂಕು ಯಸಳೂರು ಹೋಬಳಿ ಹಳ್ಳಿಯೂರು ಗ್ರಾಮದ ಪ್ರಿಯಾ ಮೃತರು. ಪ್ರದೀಪ್ ಶಿಕ್ಷೆಗೆ ಗುರಿಯಾದ ವ್ಯಕ್ತಿ. ಪ್ರಿಯಾ ಹಾಗೂ ಪ್ರದೀಪ್ ಪರಸ್ಪರ ಪ್ರೀತಿಸಿ ಕುಟುಂಬಸ್ಥರ ಸಮ್ಮುಖದಲ್ಲಿ ನಿಶ್ಚಿತಾರ್ಥ ಮಾಡಿಕೊಂಡಿದ್ದರು. 2015ರ ಜ. 7ರಂದು ಪ್ರಿಯಾ ಮೊಬೈಲ್‌ನಲ್ಲಿ ಯಾರದೋ ಜೊತೆಗೆ ಮಾತನಾಡುತ್ತಿದ್ದಾಳೆ ಎಂದು ಸಂಶಯದಿಂದ ಪ್ರದೀಪ್ ಆಕೆಯನ್ನು ಗ್ರಾಮ ಸಮೀಪದ ಕಾಡಿಗೆ ಕರೆದೊಯ್ದು ಧರಿಸಿದ್ದ ಚೂಡಿದಾರ್ ವೇಲ್‌ನಿಂದ ಕುತ್ತಿಗೆ ಬಿಗಿದು ಕೊಲೆ ಮಾಡಿದ್ದ. ಬಳಿಕ ಸಾಕ್ಷ್ಯ ನಾಶಕ್ಕಾಗಿ ಅದೇ ವೇಲ್‌ನಿಂದ ಪಕ್ಕದಲ್ಲೇ ಇದ್ದ ನೇರಳೆ ಮರದ ಕೊಂಬೆಗೆ ನೇಣು ಬಿಗಿದುಕೊಂಡಂತೆ ಮಾಡಿ ಆತ್ಮಹತ್ಯೆಯ ಕಥೆ ಕಟ್ಟಿದ್ದ.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ ಜಿಲ್ಲಾ 3ನೇ ಅಪರ ಮತ್ತು ಸತ್ರ ನ್ಯಾಯಾಧೀಶ ಆನಂದ್ ಅವರು, ಪ್ರದೀಪ್ ವಿರುದ್ಧದ ಆರೋಪಗಳು ಸಾಬೀತಾದ ಹಿನ್ನಲೆಯಲ್ಲಿ ಜೀವಾವಧಿ ಶಿಕ್ಷೆ ಮತ್ತು 20 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಯು.ವಿನಯರಾಣಿ ಮತ್ತು ಇ.ಡಿ. ಶ್ರೀನಿವಾಸ ವಾದ ಮಂಡಿಸಿದ್ದರು.

## ಮನೆ ಬೀಗ ಮುರಿದು 48 ಗ್ರಾಂ ಚಿನ್ನ, 325 ಗ್ರಾಂ ಬೆಳ್ಳಿ ಆಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮನೆ ಬೀಗ ಮುರಿದು ಒಳ ಪ್ರವೇಶಿರುವ ಕಳ್ಳರು 48 ಗ್ರಾಂ ತೂಕದ ಚಿನ್ನಾಭರಣ ಹಾಗೂ 325 ಗ್ರಾಂ ಬೆಳ್ಳಿ ಆಭರಣ ಕದ್ದಿರುವ ಘಟನೆ ಅಶೋಕ ನಗರದಲ್ಲಿ ನಡೆದಿದೆ.

ಸುನೀತ ಹಾಗೂ ಅಶೋಕ ಎಂಬುವರ ಮನೆಯಲ್ಲಿ ಮೇ 2ರ ಹಾಡ ಹಗಲೇ ಕಳ್ಳತನವಾಗಿದೆ. ದಂಪತಿಗಳಿಬ್ಬರು ಮನೆಗೆ ಬೀಗ ಹಾಕಿ ಸಂಬಂಧಿಕರ ಮನೆಗೆ ತೆರಳಿದ್ದರು. ಮಾರನೇ ದಿನ ಬಂದು ನೋಡಿದಾಗ ಬೀಗ ಮುರಿದು ಬೀರುವಿನಲ್ಲಿಟಿಟದ್ದ ಚಿನ್ನಾಭರಣ ದೋಚಿರುವುದು ದೃಢಪಟ್ಟಿದೆ. 10ಗ್ರಾಂ ತೂಕದ ಚಿನ್ನದ ಓಲೆ, 4 ಗ್ರಾಂ ತೂಕದ ಕೆಂಪು ಹರಳಿನ ಓಲೆ, 4 ಗ್ರಾಂ ತೂಕದ ಬಿಳಿ ಹರಳಿನ ಓಲೆ, 8 ಗ್ರಾಂ ತೂಕದ ಕೆಂಪು ಹವಳದ 2 ಜೊತೆ ಓಲೆ, 5 ಗ್ರಾಂ ತೂಕದ ಕೆಂಪು ಹರಳಿನ ಓಲೆ, 3 ಗ್ರಾಂ ತೂಕದ ಹಾರ್ಟ ಶೇಪ್ ಓಲೆ, 3 ಗ್ರಾಂ ತೂಕದ ಉಂಗುರ, 2 ಗ್ರಾಂನ 1 ಉಂಗುರ, 6 ಗ್ರಾಂ ತೂಕದ ಮಕ್ಕಳ ಓಲೆ ಜುಮುಕಿ, 3 ಗ್ರಾಂ ತೂಕದ ಒಂದು ಲಕ್ಷ್ಮೀ ಡಾಲರ್ ಹಾಗು 30 ಗ್ರಾಂ ತೂಕದ ಒಂದು ಬೆಳ್ಳಿ ಸರ, 50 ಗ್ರಾಂ ತೂಕದ ಲಾಂಗ್ ಸರ, 20 ಗ್ರಾಂ ತೂಕದ 2 ಬೆಳ್ಳಿ ಲೋಟ, 30 ಗ್ರಾಂ ತೂಕದ ಪಂಚಪತ್ರೆ, 50 ಗ್ರಾಂ ತೂಕದ 4 ಜೊತೆ ಬೆಳ್ಳಿ ದೀಪ, 50 ಗ್ರಾಂ ತೂಕದ 3 ಜೊತೆ ಕುಂಕುಮದ ಬಟ್ಟಲು, 35 ಗ್ರಾಂ ತೂಕದ 3 ಬೆಳ್ಳಿ ತಟ್ಟೆ, 20 ಗ್ರಾಂನ ಬೆಳ್ಳಿ ತಟ್ಟೆ, 40 ಗ್ರಾಂ ತೂಕದ ಮಕ್ಕಳ ಒಂದು ಜೊತೆ ಕಾಲು ಚೈನು ಕಳವು ಮಾಡಲಾಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಹಾಡ ಹಗಲೇ 15 ಗ್ರಾಂ ಚಿನ್ನಾಭರಣ ಕಳವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 15 ಗ್ರಾಂ ತೂಕದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಾಲ್ಲೂಕಿನ ಜಿನ್ನಾಥಪುರ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರಮೇಶ ಅವರು ಏ. 27 ರಂದು ಮನೆಗೆ ಬೀಗ ಹಾಕಿಕೊಂಡು ಪಟ್ಟಣದ ಆಸ್ಪತ್ರೆಗೆ ತೆರಳಿದ್ದರು. ವಾಪಸ್ ಮನೆಗೆ ಬಂದಾಗ ಬಾಗಿಲು ತೆರೆದಿರುವುದು ಗೊತ್ತಾಯಿತಾದರೂ ಆಸ್ಪತ್ರೆಗೆ ಹೋಗುವ ಧಾವಂತದಲ್ಲಿ ಹಾಗೆಯೇ ಬಿಟ್ಟಿರಬಹುದೆಂದು ಸುಮ್ಮನಿದ್ದರು. ಮೇ 3ರಂದು ರಮೇಶ ಅವರ ಪತ್ನಿ ಸುಶೀಲ ಬೀರು ಪರಿಶೀಲಿಸಿದಾಗ ಚಿನ್ನಾಭರಣ ನಾಪತ್ತೆಯಾಗಿರುವುದು ತಿಳಿದಿದೆ. 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 5 ಗ್ರಾಂ ತೂಕದ ಒಂದು ಜೊತೆ ಚಿನ್ನದ ಮಾಟಿ, 3 ಗ್ರಾಂ ತೂಕದ ಚಿನ್ನದ ಸೈಡ್ ಮಾಟಿ ಮತ್ತು 2 ಗ್ರಾಂ ತೂಕದ ಸಣ್ಣಮಕ್ಕಳ 2 ಚಿನ್ನದ ಉಂಗುರ ಕಳುವಾಗಿದೆ. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಟ್ರ್ಯಾಕ್ಟರ್ ಹರಿದು ಪಾದಚಾರಿ ಸಾವು

ಹಾಸನ: ಟ್ರಾಕ್ಟರ್ ಡಿಕ್ಕಿಯಾಗಿ ರಸ್ತೆಬದಿ ಕಾಲ್ನಡಿಗೆಯಲ್ಲಿ ಹೋಗುತ್ತಿದ್ದ ವ್ಯಕ್ತಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಕೋರವಂಗಲ ಸಮೀಪ ನಡೆದಿದೆ.

ದುದ್ದ ಹೋಬಳಿ ಸೋಮಹಳ್ಳಿ ಗ್ರಾಮದ ನಿಂಗರಾಜು (36) ಮೃತರು. ಮೇ 2ರಂದು ಕೂಲಿ ಕೆಲಸಕ್ಕೆಂದು ನಡೆದುಕೊಂಡು ಹೋಗುತ್ತಿದ್ದಾಗ ಟ್ರ್ಯಾಕ್ಟರ್ ಚಾಲಕ ಹರ್ಷ ಜೋರಾಗಿ ವಾಹನ ಓಡಿಸಿಕೊಂಡು ಬಂದು ಡಿಕ್ಕಿ ಮಾಡಿದ್ದಾನೆ. ಅಪಘಾತದ ರಭಸಕ್ಕೆ ನಿಂಗರಾಜು ಅವರು ಟ್ರ್ಯಾಕ್ಟರ್‌ನ ಹಿಂಭಾಗದ ಚಕ್ರಕ್ಕೆ ಸಿಲುಕಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ದುದ್ದ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೆಣಸಮಕ್ಕಿ ಗ್ರಾಮದಲ್ಲಿ ದೇವಾಲಯ ಪುನರ್ ಪ್ರತಿಷ್ಠಾಪನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಜಗತ್ತಿನ ಸಂಸ್ಕೃತಿ, ನಾಗರಿಕತೆ ಹಾಗು ಬದುಕುವ ಕಲೆಯನ್ನು ವಿಶ್ವಕ್ಕೆ ಪರಿಚಯಿಸಿದವರು ಭಾರತೀಯರು. ದೇಶ ಉಳಿಯಬೇಕೆಂದರೆ ಹಿಂದೂ ಧರ್ಮ ಉಳಿಯಬೇಕು. ಈ ನಿಟ್ಟಿನಲ್ಲಿ ದೇಶದಾದ್ಯಂತ ಧಾರ್ಮಿಕ ಕಾರ್ಯಕ್ರಮಗಳು ನಡೆಯಬೇಕೆಂದು ಜವೇನಹಳ್ಳಿ ವಿರಕ್ತ ಮಠದ ಶ್ರೀ ಸಂಗಮೇಶ್ವರ ಸ್ವಾಮೀಜಿ ಹೇಳಿದರು.



ತಾಲ್ಲೂಕಿನ ಬಾಳ್ಳುಪೇಟೆ ಸಮೀಪದ ಮೆಣಸಮಕ್ಕಿ ಗ್ರಾಮದಲ್ಲಿ ಶ್ರೀ ನಾಗಲಿಂಗೇಶ್ವರಸ್ವಾಮಿ ಹಾಗು ಮಾರಿದುರ್ಗಮ್ಮನವರ ದೇವಾಲಯದ ಪುನರ್ ಪ್ರತಿಷ್ಠಾಪನ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ಶಾಸಕ ಸಿಮೆಂಟ್ ಮಂಜು ಮಾತನಾಡಿ, ಹಿಂದೂ ಧರ್ಮವು ಸಂಸ್ಕೃತಿ ಮತ್ತು ಸಂಪ್ರದಾಯಗಳ ಪ್ರತೀಕವಾಗಿದೆ. ಪ್ರತಿಯೊಬ್ಬರೂ ಸಂಸ್ಕೃತಿಯೊಂದಿಗೆ ಜೀವನ ನಡೆಸಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ. ಭಾರತೀಯ ಸಂಸ್ಕೃತಿಯನ್ನು ಇತರ ರಾಷ್ಟ್ರಗಳೂ ಅಳವಡಿಸಿಕೊಳ್ಳುತ್ತಿರುವುದು ಹೆಮ್ಮೆಯ ಸಂಗತಿ. ಪಾಲಕರು ಮಕ್ಕಳಿಗೆ ಬಾಲ್ಯದಿಂದಲೇ ಸಂಸ್ಕೃತಿ ಮತ್ತು ಧಾರ್ಮಿಕ ಮೌಲ್ಯಗಳನ್ನು ಬೋಧಿಸಬೇಕೆಂದು ಸಲಹೆ ನೀಡಿದರು.

ಹಿಂದೂ ಧರ್ಮದ ಆಚರಣೆಗಳಲ್ಲಿ ವೈಜ್ಞಾನಿಕತೆ ಅಡಗಿದೆ. ದ್ವೇಷ, ಅಸೂಯೆ ತೊರೆದು ಎಲ್ಲರನ್ನು ಸಾಮರಸ್ಯದಿಂದ ಕಾಣುವ ಮನೋಭಾವ ಬೆಳೆಸಿಕೊಳ್ಳಬೇಕು. ಹಿಂದೂ ಧರ್ಮದೊಂದಿಗೆ ಭಾರತದಲ್ಲಿ ಜನಿಸಿರುವುದು ನಮ್ಮ ಭಾಗ್ಯ ಎಂದು ಹೇಳಿದರು.

ವಕೀಲ ಛಲವಾದಿ ಡಿ.ಕರಿಯಣ್ಣ ಮಾತನಾಡಿ, ಭಾರತ ಮಾತೆ ತ್ಯಾಗ ಮತ್ತು ಬಲಿದಾನದ ಸಂಕೇತ. ದೇಶದ ಗೌರವವನ್ನು ಕಾಪಾಡುವ ಮನೋಭಾವ ಪ್ರತಿಯೊಬ್ಬರಲ್ಲೂ ಇರಬೇಕು. ಹಿಂದೂ ಧರ್ಮ ಮತ್ತು ಸಂಸ್ಕೃತಿಯನ್ನು ಹಾಳು ಮಾಡುವ ಪ್ರಯತ್ನಗಳಿಗೆ ಅವಕಾಶ ನೀಡದೆ ಒಗ್ಗಟ್ಟಿನಿಂದ ಎದುರಿಸಬೇಕಾಗಿದೆ ಎಂದು ತಿಳಿಸಿದರು.

ಚಿಂತಕ ಯಡೇಹಳ್ಳಿ ಆರ್. ಮಂಜುನಾಥ್ ಮಾತನಾಡಿ, ಹಿಂದೂಗಳು ಸಂಸ್ಕಾರ ಮತ್ತು ಸಂಸ್ಕೃತಿಯಲ್ಲಿ ಬದುಕಿದವರು. ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ಅನುಕರಣೆಯಿಂದ ಭವ್ಯ ಪರಂಪರೆ ಹದಗೆಡುತ್ತಿದೆ. ತಾಯಂದಿರು ಮಕ್ಕಳಿಗೆ ಚಿಕ್ಕಂದಿನಿಂದಲೇ ಧಾರ್ಮಿಕ ಮೌಲ್ಯಗಳು ಮತ್ತು ಸದ್ವಿಚಾರಗಳನ್ನು ಕಲಿಸಬೇಕು ಎಂದು ಹೇಳಿದರು.

ಹಿಂದೂ ಹಿತ ರಕ್ಷಣಾ ಸಂಘಟನೆಯ ಮುಖಂಡ ರಘು ಸಕಲೇಶಪುರ ಮಾತನಾಡಿ, ಸನಾತನ ಧರ್ಮ ಮತ್ತು ಸಂಸ್ಕೃತಿಯ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ ಎಂದರು.

ವೇದಿಕೆಯಲ್ಲಿ ಜಯರಾಜ್, ನಾಗೇಶ್, ಬಿ.ಎಂ.ಶಿವಕುಮಾರ್, ರಾಜಶೇಖರ್, ಚಂದ್ರಣ್ಣ, ಪುಟ್ಟಯ್ಯ ಹಾಗೂ ಇತರರಿದ್ದರು.

## ಅತಿಥಿ ಉಪನ್ಯಾಸಕರು/ಸಂಪನ್ಮೂಲ ವ್ಯಕ್ತಿ ಹುದ್ದೆಗೆ ಆಹ್ವಾನ

ಹಾಸನ: ಮೈಸೂರು ಚಾಮರಾಜೇಂದ್ರ, ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ 2026-27 ನೇ ಶೈಕ್ಷಣಿಕ ಸಾಲಿಗೆ ಮಾತ್ರ, ಅತಿಥಿ ಉಪನ್ಯಾಸಕ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಬೋಧನೆ ಮಾಡಲು ಇಚ್ಛಿಸುವ ಅಭ್ಯರ್ಥಿಗಳು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗೌರವ ಸಂಭಾವನೆ ಆಧಾರದ ಮೇಲೆ ಷರತ್ತು ಹಾಗೂ ನಿಬಂಧನೆಗಳನ್ವಯ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ.

ಅನ್ವಯ ಕಲೆ, ಚಿತ್ರಕಲೆ, ಶಿಲ್ಪಕಲೆ, ಅಚ್ಚುಕಲೆ, ಮತ್ತು ಛಾಯಾಚಿತ್ರ ಪತ್ರಿಕೋದ್ಯಮ, ಬೋಧನಾ ವಿಷಯ ಪ್ರಾಯೋಗಿಕ ಮತ್ತು ಥಿಯರಿ, ಕಲಾ ಇತಿಹಾಸಕ್ಕೆ ಥಿಯರಿ ಅರ್ಹತೆಗಳು ನಿಗದಿಪಡಿಸಿದ ವಿದ್ಯಾರ್ಹತೆ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ಸಂಬಂಧಪಟ್ಟ ವಿಷಯದಲ್ಲಿ ಸ್ನಾತಕೋತ್ತರ ಪದವಿಯಲ್ಲಿ ಶೇ. 55 ಅಂಕ ಪಡೆದಿರಬೇಕು.

ಆಸಕ್ತ ಅಭ್ಯರ್ಥಿಗಳು ರಾಜ್ಯ ಸರ್ಕಾರದ ಅಂತರ್ಜಾಲ ವಿಳಾಸ www.mysore.nic.in ಮತ್ತು www.cavamysore.karnataka.gov.in ಅಥವಾ ದೂರವಾಣಿ ಸಂಖ್ಯೆ 0821-2438931 ಇಲ್ಲಿಗೆ ಸಂಪರ್ಕಿಸಬಹುದು.

# ಶಿರಾಡಿ ಘಾಟ್‌ನ 13 ಕಡೆ ತಡೆಗೋಡೆ ನಿರ್ಮಾಣ

## ಸಂಭವನೀಯ ಭೂಕುಸಿತ ತಡೆಗೆ ಕ್ರಮ | ಮಳೆಗಾಲದ ಸಮಸ್ಯೆ ತಪ್ಪಿಸಲು ಜಿಲ್ಲಾಡಳಿತ ಯೋಜನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಮಳೆಗಾಲದಲ್ಲಿ ಭೂಕುಸಿತದಂತಹ ಸಮಸ್ಯೆಯಿಂದ ಸಾರ್ವಜನಿಕರಿಗೆ ಆಗುವ ತೊಂದರೆಯನ್ನು ತಡೆಗಟ್ಟುವ ಉದ್ದೇಶದಿಂದ ಜಿಲ್ಲಾಡಳಿತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿದ್ದು ಈ ವರ್ಷವಾದರೂ ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಅವಘಡ, ರಸ್ತೆ ಬಂದ್‌ನಂತಹ ಪ್ರಹಸನಗಳು ಮರುಕಳಿಸುವುದಿಲ್ಲವೆಂಬ ಆಶಾಭಾವ ಮೂಡಿದೆ.

ರಾಷ್ಟ್ರೀಯ ಹೆದ್ದಾರಿ 75ರ ಕಾಮಗಾರಿ ತ್ವರಿತಗತಿಯಲ್ಲಿ ಸಾಗುತ್ತಿದ್ದು, ವರ್ಷಾಂತ್ಯಕ್ಕೆ ಪೂರ್ಣಗೊಳ್ಳುವ ಸಾಧ್ಯತೆ ಇದೆ. 2026ರ ಜೂನ್ ವೇಳೆಗೆ ಬಾಕಿ ಕಾಮಗಾರಿ ಮುಗಿಸುವ ನಿಟ್ಟಿನಲ್ಲಿ ಕೆಲಸ ನಡೆಯುತ್ತಿದೆಯಾದರೂ ಅಷ್ಟರೊಳಗೆ ಕೆಲಸ ಮುಗಿಯುವುದು ಅನುಮಾನ. ಆದ್ದರಿಂದ ಭೂಕುಸಿತ ತಡೆಗಾಗಿ ಹೆದ್ದಾರಿಯಲ್ಲಿ 13 ಜಾಗಗಳನ್ನು ಸಂಭವನೀಯ ಭೂಕುಸಿತ ಪ್ರದೇಶವೆಂದು ಗುರುತಿಸಿ ತಡೆಗೋಡೆ ನಿರ್ಮಿಸಲಾಗುತ್ತಿದೆ. ಜೊತೆಗೆ 55 ಸ್ಥಳಗಳನ್ನು ಅಪಾಯಕಾರಿ ಎಂದು ಗುರುತಿಸಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಈ ಕುರಿತು ಸ್ಥಳೀಯರೊಂದಿಗೆ ಚರ್ಚಿಸಿ ಮಳೆಗಾಲದ ವೇಳೆ ಅನುಸರಿಸಬೇಕಾದ ಕ್ರಮಗಳ ಕುರಿತು ಅರಿವು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಶಾಸಕ ಸಿಮೆಂಟ್ ಮಂಜು ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳು ಈ ನಿಟ್ಟಿನಲ್ಲಿ ಮುತುವರ್ಜಿ ವಹಿಸಿದ್ದಾರೆ. ಭೂಕುಸಿತದಿಂದ ರಸ್ತೆ ಬಂದ್ ಆದ ಬಳಿಕ ಪರಿಹಾರಕ್ಕಾಗಿ ಪರಿತಪಿಸುವ ಬದಲು ಮೊದಲೇ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುತ್ತಿರುವುದು ಸಾರ್ವಜನಿಕರಲ್ಲಿ ನೆಮ್ಮದಿಯನ್ನುಂಟು ಮಾಡಿದೆ.




ಮುಖ್ಯವಾಗಿ ಸಕಲೇಶಪುರದಿಂದ ಗುಂಡ್ಯ ವರೆಗೆ ಸಿಗುವ ದೊಡ್ಡತಪ್ಪಲೆ, ಮಾರನಹಳ್ಳಿ, ಹೆಗ್ಗದ್ದೆ, ಆನೆಮಹಲ್, ದೋಣಿಗಲ್, ಕಪ್ಪಳ್ಳಿ ಭಾಗದಲ್ಲಿ ಕಳೆದ ಮೂರು ವರ್ಷಗಳಿಂದ ಭೂಕುಸಿತ ಹೆಚ್ಚುತ್ತಿದೆ. ಇಲ್ಲಿ ತಡೆಗೋಡೆ ನಿರ್ಮಿಸುವ ಕೆಲಸ ಕೈಗೊಳ್ಳಲಾಗಿದೆ.

ಸಕಲೇಶಪುರದಿಂದ ಮಾರನಹಳ್ಳಿ ವರೆಗೆ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ 75 ಚತುಷ್ಪಥ ರಸ್ತೆ ಅಗಲೀಕರಣ ಕಾಮಗಾರಿ ಪೂರ್ಣಗೊಂಡರೆ ವಾಹನ ಸವಾರರಿಗೆ ಭಾರೀ ಅನುಕೂಲವಾಗಲಿದೆ. ಈಗಾಗಲೇ ಕಾಮಗಾರಿ ಮುಗಿಯುವ ಹಂತಕ್ಕೆ ತಲುಪಿದೆ. ಆದರೆ ರಸ್ತೆಯ ಎರಡು ಬದಿಗಳಲ್ಲಿ ಅವೈಜ್ಞಾನಿಕವಾಗಿ ಗುಡ್ಡ ಬಗೆದ ಪರಿಣಾಮ ಪ್ರತಿ ಮಳೆಗಾಲದಲ್ಲೂ ಗುಡ್ಡ ಕುಸಿಯುತ್ತಿದೆ. ಅದರಿಂದ ಎಚ್ಚೆತ್ತ ಜಿಲ್ಲಾಡಳಿತ ಹಾಗು ಹೆಚ್‌ಎನ್ ಅಧಿಕಾರಿಗಳು ಕ್ರಮಕ್ಕೆ ಮುಂದಾಗಿದ್ದಾರೆ.

### ತಡೆಗೋಡೆಯಿಂದ ಪರಿಹಾರ ಅಸಾಧ್ಯ

ಹೆದ್ದಾರಿಯ ಭೂಕುಸಿತ ಪ್ರದೇಶದಲ್ಲಿ ಕೇವಲ ತಡೆಗೋಡೆ ನಿರ್ಮಿಸಿದರೆ ಪ್ರಯೋಜನವಿಲ್ಲ. ಮಳೆ ನೀರು ಸರಾಗವಾಗಿ ಹರಿಯುವಂತೆ ತಡೆಗೋಡೆ ಮಧ್ಯೆಗಳಲ್ಲಿ ಹೋಲ್‌ಗಳನ್ನು ಮಾಡಬೇಕು. ಇಲ್ಲವಾದರೆ ಅತಿಯಾದ ಶೀತದಿಂದ ತಡೆಗೋಡೆ ಮೇಲೆಯೇ ಭೂಕುಸಿತವಾಗಿ ದೊಡ್ಡ ಅನಾಹುತ ಸಂಭವಿಸುವ ಸಾಧ್ಯತೆ ಇದೆ ಎಂದು ಶಾಸಕ ಸಿಮೆಂಟ್‌ಮಂಜು ಅವರು ಹೇಳಿದ್ದಾರೆ.

ಕೇಂದ್ರ ಭೂವಿಜ್ಞಾನ ಸಮೀಕ್ಷೆ ಸಂಸ್ಥೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಶಿರಾಡಿಘಾಟ್ ರಸ್ತೆ ಅಕ್ಕಪಕ್ಕದ ಹದಿಮೂರು ಭೂಕುಸಿತವಾಗುವ, ಆಗುತ್ತಿರುವ ಜಾಗ ಹಾಗೂ ಸುಮಾರು 55 ಗುಡ್ಡ ಕುಸಿತ ಪ್ರದೇಶಗಳನ್ನು ಗುರುತು ಮಾಡಿದ್ದಾರೆ. 55 ಕಡೆಗಳ ಕೆಲವು ಭಾಗಗಳಲ್ಲಿ ಜನರು ವಾಸವಿದ್ದು ಅವರಿಗೆ ಮಳೆಗಾಲದಲ್ಲಿ ಉಂಟಾಗುವ ಭೂಕುಸಿತದ ಬಗ್ಗೆ ಕಾರ್ಯಕ್ರಮದ ಮೂಲಕ ಅರಿವು ಮೂಡಿಸುವ ಮೂಲಕ ಮಳೆಗಾಲದಲ್ಲಿ ಸಂಭವಿಸುವ ಅನಾಹುತಗಳನ್ನು ತಪ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ತಿಳಿಸಿದ್ದಾರೆ.

### ಮಳೆಗಾಲದಲ್ಲಿ ಭಾರೀ ತೊಂದರೆ

ಬಂದರು ನಾಡು ಮಂಗಳೂರಿನಿಂದ ರಾಜಧಾನಿ ಬೆಂಗಳೂರಿಗೆ ಸಂಪರ್ಕಿಸುವ ಮುಖ್ಯ ರಸ್ತೆ ಇದಾಗಿದೆ. ಭಾರೀ ಗಾತ್ರದ ಲಾರಿಗಳನ್ನು ಸರಕು ಸಾಮಗ್ರಿಗಳೊಂದಿಗೆ ಮಂಗಳೂರಿನಿಂದ ಬೆಂಗಳೂರಿಗೆ ತೆರಳುತ್ತವೆ. ಜೊತೆಗೆ ಉದ್ಯೋಗಿಗಳು ಸಹ ಇದೇ ರಸ್ತೆಯನ್ನು ಅವಲಂಬಿಸಿದ್ದಾರೆ. ವಾರಾಂತ್ಯದಲ್ಲಿ ಹೆದ್ದಾರಿಯಲ್ಲಿ ವಾಹನ ದಟ್ಟಣೆ ವಿಪರೀತವಾಗಿರುತ್ತದೆ. ಮಳೆಗಾಲ ಬಂತೆಂದರೆ ಗುಡ್ಡ ಕುಸಿತ, ಮರಗಳು ಧರೆಗುರುಳುವುದು, ಕಿ.ಮೀ.ಗಟ್ಟಲೇ ಸಂಚಾರ ದಟ್ಟಣೆ ಉಂಟಾಗಿ ವಾಹನಗಳು ದಿನಗಟ್ಟಲೇ ನಿಂತಲ್ಲೇ ನಿಲ್ಲಬೇಕಾದ ಪರಿಸ್ಥಿತಿ ಇದೆ. ಆದರೆ ಈ ವರ್ಷ ಬೇಸಿಗೆಯಲ್ಲೇ ಮುಂಜಾಗ್ರತಾ ಕ್ರಮಕ್ಕೆ ಮುಂದಾಗಿರುವುದು ಆಶಾಭಾವ ಮೂಡಿಸಿದೆ.

# ನಾಳೆ ದಬ್ಬಳಿಕಟ್ಟೆಯಲ್ಲಿ ಅರ್ಜುನ ಸ್ಮಾರಕ ಉದ್ಘಾಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಸಕಲೇಶಪುರ ತಾಲ್ಲೂಕು ಯಸಳೂರು ಅರಣ್ಯ ವಲಯದ ದಬ್ಬಳಿಕಟ್ಟೆಯಲ್ಲಿ ನಿರ್ಮಿಸಿರುವ ಅರ್ಜುನ ಆನೆಯ ಸ್ಮಾರಕ ಉದ್ಘಾಟನೆ ಸಮಾರಂಭವನ್ನು ಮೇ 6ರಂದು ಹಮ್ಮಿಕೊಳ್ಳಲಾಗಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

2023ರ ಡಿ. 4ರಂದು ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ವೀರಾವೇಶದಿಂದ ಹೋರಾಡಿ, ಪಶುವೈದ್ಯರು, ಸಿಬ್ಬಂದಿ ಜೀವ ಉಳಿಸಿ ಹುತಾತ್ಮನಾದ ಅರ್ಜುನ ಆನೆಯ ಸಮಾಧಿ ಸ್ಥಳದಲ್ಲಿ ನಿರ್ಮಿಸಿರುವ ಸ್ಮಾರಕ ಇದಾಗಿದೆ. ದಸರಾ ಮಹೋತ್ಸವದಲ್ಲಿ 8 ಬಾರಿ ಚಿನ್ನದ ಅಂಬಾರಿ ಹೊತ್ತು ಜನರ ಪ್ರೀತಿಗೆ ಪಾತ್ರನಾಗಿದ್ದ ಅರ್ಜುನ ಆನೆಯ ಸಾವು ಇಲಾಖೆಗೆ ದೊಡ್ಡ ನಷ್ಟವಾಗಿದೆ. ಸಮಾಧಿ ಸ್ಥಳದಲ್ಲಿ ಮತ್ತು ನಾಗರಹೊಳೆಯ ಬಳ್ಳೆಯಲ್ಲಿ ಸ್ಮಾರಕ ನಿರ್ಮಿಸುವುದಾಗಿ ಸರ್ಕಾರ ಭರವಸೆ ನೀಡಿತ್ತು. ಅದರಂತೆ ಈಗಾಗಲೇ ಬಳ್ಳೆ ಶಿಬಿರದಲ್ಲಿ ಅರ್ಜುನನ ಹಿರಿಮೆ, ಸಾಹಸಗಾಥೆಗಳನ್ನು ತಿಳಿಸುವ ರೀತಿಯಲ್ಲಿ ಸ್ಮಾರಕ ಅನಾವರಣ ಮಾಡಲಾಗಿದೆ. ಮೇ 6ರಂದು ಯಸಳೂರಿನ ಸಮಾಧಿ ಸ್ಥಳದ ಸ್ಮಾರಕ ಉದ್ಘಾಟಿಸಲಾಗುವುದು. ಈ ಎರಡೂ ಸ್ಥಳದಲ್ಲಿ ಅರ್ಜುನ ಆನೆಯ ಪ್ರತಿರೂಪದಂತಿರುವ ಪ್ರತಿಮೆಗಳನ್ನು ನಿರ್ಮಿಸಲಾಗಿದ್ದು, ಅರ್ಜುನ ವಿವಿಧ ಆನೆ ಕಾರ್ಯಾಚರಣೆ, ಹುಲಿ ಮತ್ತು ಚಿರತೆ ಕಾರ್ಯಾಚರಣೆಯಲ್ಲಿ ಮತ್ತು ದಸರಾ ಮಹೋತ್ಸವದಲ್ಲಿ ಪಾಲ್ಗೊಂಡ ಚಿತ್ರಗಳನ್ನು ಹಾಕುವಂತೆ ಸೂಚಿಸಲಾಗಿದೆ ಎಂದೂ ತಿಳಿಸಿದ್ದಾರೆ.


ಯಸಳೂರಿನಲ್ಲಿ ಸ್ಮಾರಕ ಸಿದ್ಧವಾಗಿ ಹಲವು ತಿಂಗಳುಗಳೇ ಕಳೆದಿದೆ. ಕಾರಣಾಂತರದಿಂದ ಸ್ಮಾರಕ ಉದ್ಘಾಟನೆ ವಿಳಂಬವಾಗಿದ್ದು, ಕಾರ್ಯಕ್ರಮಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ, ಶಾಸಕ ಸಿಮೆಂಟ್ ಮಂಜು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ.

# ಅಂತರ ಕಾಲೇಜು ಕ್ರೀಡಾಕೂಟ: ಪ್ರಥಮ ಸ್ಥಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಹಾಸನ ವಿಶ್ವವಿದ್ಯಾಲಯ ಅಂತರ ಕಾಲೇಜುಗಳ ಕ್ರೀಡಾಕೂಟದಲ್ಲಿ ಹ್ಯಾಂಡ್ ಬಾಲ್ ಹಾಗೂ ಬ್ಯಾಸ್ಕೆಟ್ ಬಾಲ್ ಕ್ರೀಡಾಕೂಟಗಳಲ್ಲಿ ನಗರದ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಪಡೆದಿದ್ದಾರೆ.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಈಚೆಗೆ ನಡೆದ ಹ್ಯಾಂಡ್ ಬಾಲ್ ಹಾಗೂ ಬ್ಯಾಸ್ಕೆಟ್ ಬಾಲ್ ಎರಡೂ ಕ್ರೀಡಾಕೂಟದ ಅಂತಿಮ ಹಣಾಹಣಿಯಲ್ಲಿ ಎಂ.ಜಿ. ರಸ್ತೆ ಮಹಿಳಾ ಕಾಲೇಜಿನೊಂದಿಗೆ ಸೆಣಸಾಟ ನಡೆಸಿದ ವಿದ್ಯಾರ್ಥಿನಿಯರು ಅಂತಿಮವಾಗಿ ಎರಡೂ ಕ್ರೀಡಾಕೂಟದಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ.




ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕ ಎಚ್.ವಿ. ಮುರಳಿ ಅವರ ಮಾರ್ಗದರ್ಶನದಲ್ಲಿ ಕ್ರೀಡಾಪಟುಗಳು ತರಬೇತಿ ಪಡೆದುಕೊಂಡಿದ್ದರು. ವಿಜೇತ ವಿದ್ಯಾರ್ಥಿಗಳಿಗೆ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಹಾಗೂ ಕ್ರೀಡಾ ವಿಭಾಗದ ಸಂಚಾಲಕ ಡಾ.ಕೆ.ಆರ್. ಸುರೇಶ್ ಕುಮಾರ್ ಅವರುಗಳು ಪ್ರಶಸ್ತಿ ಪತ್ರ ಹಾಗೂ ಪಾರಿತೋಷಕ ವಿತರಣೆ ಮಾಡಿದರು.

# ಮೇ 15 ರಿಂದ 3 ದಿನ ಬೆಂಗಳೂರಿನಲ್ಲಿ ಜೆಪಿಎಲ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರ ಜನ್ಮ ದಿನ ಹಾಗೂ ಜೆಡಿಎಸ್ ಪಕ್ಷದ ರಜತ ಮಹೋತ್ಸವ ಪ್ರಯುಕ್ತ ಪಕ್ಷದ ಸಾಮಾಜಿಕ ಜಾಲತಾಣ ಮತ್ತು ಯುವ ಜನತಾ ದಳ ವಿಭಾಗದಿಂದ ರಾಜ್ಯ ಮಟ್ಟದ ಜನತಾ ಪ್ರೀಮಿಯರ್ ಲೀಗ್ (ಜೆಪಿಎಲ್) ಏರ್ಪಡಿಸಲಾಗಿದೆ.

ಮೇ 15 ರಿಂದ 17ರ ವರೆಗೆ ಬೆಂಗಳೂರಿನ ಮಾದಾವರದ ನೈಸ್ ಮೈದಾನದಲ್ಲಿ ಪಂದ್ಯಾವಳಿ ನಡೆಯಲಿದ್ದು, ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ ಹಾಗು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ಅವರು ಭಾನುವಾರ ಹಾಸನದ ಹೊಯ್ಸಳ ವಾರಿಯರ್ಸ್ ತಂಡದ ಟಿ ಶರ್ಟ್ ಹಾಗೂ ಆಹ್ವಾನ ಪತ್ರಿಕೆ ಬಿಡುಗಡೆ ಮಾಡಿದರು.

ಸೂರಜ್ ರೇವಣ್ಣ ಅವರು ಮಾತನಾಡಿ, ಪಕ್ಷದ ಕಾರ್ಯಕರ್ತರನ್ನು ಒಗ್ಗೂಡಿಸಬೇಕೆಂಬ ಉದ್ದೇಶದಿಂದ ಸಾಮಾಜಿಕ ಜಾಲತಾಣ ವಿಭಾಗದವರು ಸೇರಿ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿದ್ದಾರೆ. ಪ್ರತಿ ಜಿಲ್ಲೆಯಿಂದ ಒಂದು ತಂಡ ಭಾಗವಹಿಸಲಿದೆ ಎಂದರು.

ಮೇ 15ರ ಶುಕ್ರವಾರ ಸಂಜೆ 5 ಗಂಟೆಗೆ ಪಂದ್ಯಾವಳಿ ಆರಂಭಗೊಳ್ಳಲಿದೆ. ಜೆಡಿಎಸ್ ಸಾಮಾಜಿಕ ಜಾಲತಾಣಗಳ ವಿಭಾಗ ರಾಜ್ಯಾಧ್ಯಕ್ಷ ಹೆಚ್.ಎಸ್. ಚಂದನ್, ಯುವ ಮುಖಂಡ ಯಲಹಂಕ ಪ್ರವೀಣ್ ಕಾರ್ಯಕ್ರಮ ನೇತೃತ್ವ ವಹಿಸಿದ್ದಾರೆ ಎಂದರು.

ಕ್ರೀಡಾ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಪಂದ್ಯಾವಳಿಯ ಉದ್ದೇಶ. ಎಲ್ಲಾ ಜಿಲ್ಲೆಯ ಕ್ರಿಕೆಟ್ ಪ್ರೇಮಿಗಳು ಭಾಗವಹಿಸಲಿದ್ದಾರೆ. ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸೇರಿ ಎಲ್ಲಾ ಜೆಡಿಎಸ್ ಶಾಸಕರು ಪಾಲ್ಗೊಳ್ಳಲಿದ್ದಾರೆ ಎಂದರು.

# ಸಾಮಾಜಿಕ ಕಾರ್ಯಗಳ ಮೂಲಕ ರೋಟರಿ ಖ್ಯಾತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹಾಸನ: ಜೋನ್ 9ರ ವ್ಯಾಪ್ತಿಯಲ್ಲಿರುವ ರೋಟರಿ ಕ್ಲಬ್ ಆಫ್ ಹಾಸನ ರಾಯಲ್ 2025-26ನೇ ಸಾಲಿನಲ್ಲಿ ಗುಣಮಟ್ಟದ ಸಾಮಾಜಿಕ ಕಾರ್ಯಗಳನ್ನು ಮಾಡುವಲ್ಲಿ ಯಶಸ್ವಿಯಾಗಿದ್ದು, ಸಕ್ರಿಯವಾಗಿ ಸಂಸ್ಥೆ ಕಾರ್ಯನಿರ್ವಹಿಸಿದೆ ಎಂದು 3182 ಜಿಲ್ಲಾ ಗವರ್ನರ್ ಕೆ. ಪಾಲಾಕ್ಷ ಹೇಳಿದರು.




ನಗರದ ಖಾಸಗಿ ಹೋಟೆಲ್‌ನಲ್ಲಿ ಈಚೆಗೆ ನಡೆದ ಜಿಲ್ಲಾ ಗವರ್ನರ್ ಅಧಿಕೃತ ಭೇಟಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರೋಟರಿ ರಾಯಲ್ ಈ ವರ್ಷ ವಿಶೇಷವಾಗಿ ತನ್ನ ವರ್ಷವನ್ನು ಆರಂಭಿಸಿತು. ವರ್ಷದ ಆರಂಭದಲ್ಲೇ ಸುಮಾರು 10 ಸಾವಿರ ಸಸಿಗಳನ್ನು ವಿತರಣೆ ಮಾಡುವ ಮೂಲಕ ಒಳ್ಳೆಯ ಸಂದೇಶವನ್ನು ಸಮಾಜಕ್ಕೆ ನೀಡಿದೆ. ಬಳಿಕ ಆಯೋಜಿಸಿದ ಎಲ್ಲಾ ಕಾರ್ಯಕ್ರಮಗಳು ಗುಣಮಟ್ಟದಿಂದ ಕೂಡಿದ್ದವು. ಹಾಗಾಗಿ ಈ ವರ್ಷ ರಾಯಲ್ ಕ್ಲಬ್‌ಗೆ ಪಬ್ಲಿಕ್ ಇಮೇಜ್ ಪ್ರಶಸ್ತಿ ಕೂಡ ಲಭಿಸಿದೆ. ನಮ್ಮ 3182ರ ವಲಯದಲ್ಲಿರುವ 90 ಕ್ಲಬ್‌ಗಳ ಪೈಕಿ ರಾಯಲ್ ಕ್ಲಬ್‌ಗೆ ಪ್ರಶಸ್ತಿ ದೊರೆತಿರುವುದು ಕಾರ್ಯಕ್ರಮದ ಗುಣಮಟ್ಟವನ್ನು ಪ್ರದರ್ಶಿಸುತ್ತದೆ. ರೋಟರಿ ಸಂಸ್ಥೆಗಳು ಶಿಕ್ಷಣ, ಆರೋಗ್ಯ, ಕೃಷಿ ಸೇರಿ ಇನ್ನಿತರ ಪ್ರಮುಖ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿಕೊಂಡು ಬರುತ್ತಿದೆ. ಪ್ರತಿಯೊಂದು ಕ್ಲಬ್‌ಗಳು ತಮ್ಮ ಜವಬ್ದಾರಿಯನ್ನು ಅರಿತು ಕೆಲಸ ಮಾಡಿದರೆ ಸ್ವಸ್ಥ ಸಮಾಜವನ್ನು ನಿರ್ಮಾಣ ಮಾಡಲು ಸಹಕಾರಿಯಾಗುತ್ತದೆ. ಸಮಾಜದಿಂದ ಗಳಿಸಿಕೊಂಡಿದ್ದನ್ನು ಪುನಃ ಸಮಾಜಕ್ಕೆ ಹಿಂದಿರುಗಿಸಿಕೊಡಬೇಕಾದಲ್ಲಿ ಪ್ರತಿಯೊಬ್ಬರು ರೋಟರಿಯೊಂದಿಗೆ ಕೈಜೋಡಿಸಿ ಕೆಲಸ ಮಾಡಬೇಕು ಎಂದರು.

ಜೋನ್ 9ರ ಸಹಾಯಕ ಗವರ್ನರ್ ಜಿ.ಎನ್. ಮಂಜುನಾಥ್ ಮಾತನಾಡಿ, 2025-26ನೇ ರೋಟರಿ ಸಾಲಿನಲ್ಲಿ ರಾಯಲ್ ಕ್ಲಬ್‌ಗೆ ನೀಡಿದ ಎಲ್ಲಾ ಕೆಲಸಗಳನ್ನು ಅಚ್ಚುಕಟ್ಟಾಗಿ ಮಾಡಿಕೊಂಡು ಬಂದಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಮಾಡಲಾಗದ ಕೆಲವು ಕಾರ್ಯಕ್ರಮಗಳನ್ನು ವಲಯ ಮಟ್ಟದಲ್ಲಿ ಮಾಡುವ ಮೂಲಕ ತನ್ನ ಶಕ್ತಿಯನ್ನು ಪ್ರದರ್ಶಿಸಿದೆ. ರಾಯಲ್ ಕ್ಲಬ್‌ನಲ್ಲಿ ಬಹುತೇಕ ಯುವ ಸದಸ್ಯರೇ ಹೆಚ್ಚಾಗಿರುವುದರಿಂದ ಹೊಸ ಹೊಸ ಆಲೋಚನೆ, ಹೊಸ ಪರಿಕಲ್ಪನೆಯೊಂದಿಗೆ ಗುಣಮಟ್ಟದ ಕಾರ್ಯಕ್ರಮಗಳನ್ನು ಈ ವರ್ಷ ಸಮಾಜಕ್ಕೆ ನೀಡಿದ್ದಾರೆ ಮುಂಬರುವ ದಿನಗಳಲ್ಲಿ ಇದು ಹೀಗೆ ಮುಂದುವರೆಯಲಿ ಎಂದು ಹೇಳಿದರು.

ಜೋನ್ 9ರ ವಲಯ ಸೇನಾನಿ ಮಮತಾ ಪಾಟೀಲ್ ಮಾತನಾಡಿ, ರಾಯಲ್ ಕ್ಲಬ್‌ನ ಈ ವರ್ಷದ ಅಧ್ಯಕ್ಷರಾಗಿದ್ದ ಬಿ.ಕೆ. ಗಂಗಾಧರ್ ಅವರ ನೇತೃತ್ವದಲ್ಲಿ ಹಲವು ವಿಭಿನ್ನ ಕಾರ್ಯಕ್ರಮಗಳು ಮೂಡಿ ಬಂದವು. ಅವರು ರೋಟರಿ ಕ್ಲಬ್‌ನ ಅಧ್ಯಕ್ಷರಾಗಿದ್ದ ಅವಧಿಯಲ್ಲಿಯೇ ಅವರಿಗೆ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಕೂಡ ಲಭಿಸಿದ್ದು ವಿಶೇಷವಾಗಿತ್ತು. ಅವರ ಸಾಮಾಜಿಕ ಕಾರ್ಯಗಳು ಮುಂಬರುವ ದಿನಗಳಲ್ಲಿ ಹೀಗೆ ಇರಲಿ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ರೋಟರಿ ರಾಯಲ್ ಕ್ಲಬ್ ನ ಅಧ್ಯಕ್ಷ ಬಿ.ಕೆ. ಗಂಗಾಧರ್ ಮಾತನಾಡಿ, ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ರೋಟರಿ ಸಂಸ್ಥೆ ಉತ್ತಮ ವೇದಿಕೆಯಾಗಿದೆ. ನಮ್ಮ ರಾಯಲ್ ಕ್ಲಬ್‌ನ ಎಲ್ಲಾ ಪದಾಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಸಹಕಾರ ಪಡೆದು ಈ ವರ್ಷ ನಮ್ಮ ಕ್ಲಬ್ ಉತ್ತಮವಾಗಿ ಕಾರ್ಯನಿರ್ವಹಣೆ ಮಾಡಲು ಸಾಧ್ಯವಾಯಿತು. ಪ್ರತಿಯೊಬ್ಬರು ತಮ್ಮ ವೃತ್ತಿ ಜೀವನ ಹಾಗೂ ವೈಯಕ್ತಿಕ ಜೀವನದೊಂದಿಗೆ ರೋಟರಿಗೆ ಒಂದಿಷ್ಟು ಸಮಯ ನೀಡಿ ಅದರಲ್ಲಿ ಕೆಲಸ ಮಾಡಿದರೆ ಸಮಾಜದಲ್ಲಿರುವ ಕೆಲವು ತೊಡಕುಗಳನ್ನು ನಿವಾರಣೆ ಮಾಡಬಹುದು. ಜಿಲ್ಲಾ ಗವರ್ನರ್ ಆಗಿ ಕೆ.ಪಾಲಾಕ್ಷ ಸರ್ ಅವರುಗಳು ಉತ್ತಮ ಕೆಲಸ ಮಾಡುವುದರೊಂದಿಗೆ ಅಧೀನದಲ್ಲಿನ ಎಲ್ಲಾ ಕ್ಲಬ್‌ಗೆ ಸಹಕಾರ ನೀಡಿ ಪ್ರೋತ್ಸಾಹಿಸುವ ಕೆಲಸ ಮಾಡಿದರು. ಅದರಲ್ಲೂ ಕ್ಲಬ್ ಗೆ ವಿಶೇಷವಾಗಿ ಸಲಹೆ ಸೂಚನೆಗಳನ್ನು ನೀಡುವ ಮೂಲಕ ಕ್ಲಬ್ ನ ಗುಣಮಟ್ಟ ಹೆಚ್ಚಿಸಿಕೊಳ್ಳಲು ಸಹಕಾರ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ರಾಯಲ್ ಕ್ಲಬ್ ಮತ್ತಷ್ಟು ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಕೊಳ್ಳುವ ಮೂಲಕ ಉತ್ತಮ ಕಾರ್ಯನಿರ್ವಹಣೆ ಮಾಡಲಿದೆ ಎಂದರು.

ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಕಾರ್ಯದರ್ಶಿ ರವಿ ಕುಮಾರ್ ಪಿ., ಖಜಾಂಚಿ ದಿಲೀಪ್ ಕುಮಾರ್ ಎಚ್.ಕೆ. ಹಾಗೂ ಪದಾಧಿಕಾರಿಗಳು, ಸದಸ್ಯರು ಹಾಜರಿದ್ದರು.

# ಮಾಡಾಳು ಗ್ರಾಮದಲ್ಲಿ ಪ್ರವಚನ ಪ್ರಾರಂಭ



**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಮಾಡಾಳು: ಅರಸೀಕೆರೆ ತಾಲ್ಲೂಕಿನ ಮಾಡಾಳು ಗ್ರಾಮದ ಸ್ವರ್ಣ ಗೌರಿ ದೇವಾಲಯ ಆವರಣದಲ್ಲಿ ಕೋಡಿಮಠದ ಮಹಾತಪಸ್ವಿ ಶ್ರೀ ಶಿವಲಿಂಗಜ್ಜಯ್ಯನವರ 139ನೇ ವರ್ಷದ ಸ್ಮರಣಾರ್ಥ ಪ್ರವಚನ ಕಾರ್ಯಕ್ರಮ ಆರಂಭಿಸಲಾಗಿದೆ.

ಕೋಡಿಮಠದ ಡಾ. ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಮಾರ್ಗದರ್ಶನದಲ್ಲಿ ಮಠದ ಉತ್ತರಾಧಿಕಾರಿ ಶ್ರೀ ಚೇತನ್ ಮರಿದೇವರು ಆಶೀರ್ವಚನ ನೀಡುತ್ತಿದ್ದಾರೆ. ಜಮೀನು ಹಾಗು ಮನೆ ಕೆಲಸ ಮುಗಿಸಿ ಸಂಜೆ ವೇಳೆಗೆ ಬಿಡುವು ಮಾಡಿಕೊಳ್ಳುವ ಗ್ರಾಮಸ್ಥರು ತಂಡೋಪ ತಂಡವಾಗಿ ಆಗಮಿಸಿ ಸ್ವಾಮೀಜಿಯ ಆಶೀರ್ವಚನಕ್ಕೆ ಹಾಜರಾಗುತ್ತಿದ್ದಾರೆ.

# ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರ ನಿರ್ಲಕ್ಷ್ಯ




**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಹೊಳೆನರಸೀಪುರ: ಸರ್ಕಾರಿ ಶಾಲೆಗಳನ್ನು ಮುಚ್ಚಲು ಯತ್ನಿಸುತ್ತಿರುವ ಸರ್ಕಾರ ಬಡ ಮಕ್ಕಳ ಜೀವನದೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಶಾಸಕ ಎಚ್.ಡಿ.ರೇವಣ್ಣ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಬಿಸಿಎಂ ಇಲಾಖೆ ಆವರಣದಲ್ಲಿ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ಅದೆಷ್ಟೋ ಪ್ರಾಥಮಿಕ ಶಾಲೆಗಳು ಈಗಾಗಲೇ ಬಾಗಿಲು ಹಾಕಿದ್ದಾರೆ. ಇರುವ ಶಾಲೆ, ಕಾಲೇಜುಗಳನ್ನು ಅಭಿವೃದ್ಧಿ ಪಡಿಸಬೇಕು. ಇಲ್ಲದಿದ್ದರೆ ಖಾಸಗಿಯವರ ವ್ಯಾಪಾರೀಕರಣ ನೀತಿಗೆ ಶಿಕ್ಷಣವೂ ಒಳಪಡುತ್ತದೆ. ಅದರಿಂದ ಬಡ ವಿದ್ಯಾರ್ಥಿಗಳು ಪ್ರತಿಭೆ ಇದ್ದರೂ, ಶಿಕ್ಷಣ ಅವಕಾಶದಿಂದ ವಂಚಿತರಾಗುತ್ತಾರೆ. ಗ್ರಾಮೀಣ ಭಾಗದಲ್ಲಿ ಬಡ ವಿದ್ಯಾರ್ಥಿಗಳು ಪ್ರತಿಭಾನ್ವಿತರಾಗಿರುತ್ತಾರೆ. ಅವರು ಹಾಸ್ಟೆಲ್‌ಗಳಲ್ಲಿ ಓದಿ ಒಳ್ಳೆಯ ಅಂಕ ಪಡೆದಿದ್ದಾರೆ. ಅಂತಹವರನ್ನು ಪುರಸ್ಕರಿಸುವುದು ನಮ್ಮ ಕರ್ತವ್ಯ. ಪಟ್ಟಣದಲ್ಲಿ 2004 ರಲ್ಲಿ ಸ್ಥಾಪನೆಯಾದಾಗ 200 ರಿಂದ 300 ವಿದ್ಯಾರ್ಥಿಗಳಿದ್ದರು. ಇದೀಗ 1600 ವಿದ್ಯಾರ್ಥಿಗಳು ವ್ಯಾಸಂಗ ನಡೆಸಿದ್ದಾರೆ. ಆದರೆ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬೋಧಕರನ್ನು ನೇಮಕ ಮಾಡಿಲ್ಲ. 7 ಮೊರಾರ್ಜಿ ವಸತಿ ಶಾಲೆ, 7 ಸರ್ಕಾರಿ ಪದವಿ ಕಾಲೇಜು, ಆದರ್ಶ, ನವೋದಯ, 7 ಕರ್ನಾಟಕ ಪಬ್ಲಿಕ್ ಶಾಲೆ ಸ್ಥಾಪಿಸಿದ್ದೇವೆ. ಇದಕ್ಕೆ ಪೂರಕ ಸೌಕರ್ಯ ನೀಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಹಾಸ್ಟೆಲ್‌ನಲ್ಲಿ ಉಳಿದು ಹೆಚ್ಚು ಅಂಕಗಳಿಸಿದ ಮೆಟ್ರಿಕ್ ಪೂರ್ವ ಮತ್ತು ಎಸ್‌ಎಸ್‌ಎಲ್‌ಸಿ ಹಾಗೂ ನಂತರದ ವಿದ್ಯಾರ್ಥಿಗಳನ್ನು ಪುರಸ್ಕರಿಸಲಾಯಿತು. ಮಾಜಿ ಮುಖ್ಯಮಂತ್ರಿ ಡಿ.ದೇವರಾಜ್ ಅರಸರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು.

ಬಿಸಿಎಂ ಸಹಾಯಕ ನಿರ್ದೇಶಕ ಹರೀಶ್, ವಿದ್ಯಾರ್ಥಿನಿಲಯದ ಮೇಲ್ವಿಚಾರಕರು ಹಾಗೂ ಸಿಬ್ಬಂದಿ ಹಾಜರಿದ್ದರು.

# ಗ್ರಾಮೀಣ ಭಾಗಕ್ಕೆ ಮೂಲಸೌಕರ್ಯ ಜನಪ್ರತಿನಿಧಿಗಳ ಕರ್ತವ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್‌ವರ್ಕ್**

ಆಲೂರು: ಜನಸಾಮಾನ್ಯರಿಗೆ ಮೂಲಸೌಕರ್ಯ ಒದಗಿಸುವುದು ಜನಪ್ರತಿನಿಧಿಗಳ ಪ್ರಮುಖ ಕರ್ತವ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಪಾಳ್ಯ ಹೋಬಳಿ ಅಬ್ಬನ ಗ್ರಾಮದಿಂದ ಸಿಂಗೋಡನಹಳ್ಳಿ ಗ್ರಾಮಕ್ಕೆ ಸಂಪರ್ಕಿಸುವ 50 ಲಕ್ಷ ರೂ. ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ದೇಶ ಸ್ವಾತಂತ್ರ್ಯ ಪಡೆದು 80 ವರ್ಷಗಳಾದರೂ ಗ್ರಾಮೀಣ ಪ್ರದೇಶಗಳಲ್ಲಿ ಇನ್ನೂ ಮೂಲ ಸೌಲಭ್ಯಗಳ ಕೊರತೆ ಇದೆ.

ಅನೇಕ ಕುಗ್ರಾಮಗಳಲ್ಲಿ ಇನ್ನೂ ಕಾಲು ದಾರಿಯಲ್ಲೇ ಸಂಚಾರ ನಡೆಯುತ್ತಿದೆ. ಅಂತಹ ಪ್ರದೇಶಗಳನ್ನು ಗುರುತಿಸಿ ರಸ್ತೆ ನಿರ್ಮಾಣಕ್ಕೆ ಮುಂದಾಗಿರುವುದಾಗಿ ಹೇಳಿದರು.



ಪ್ರಸ್ತುತ ಬಿಸಿಲಿನ ತೀವ್ರತೆಯಿಂದ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ ಬೆಳಿಗ್ಗೆ 10ರಿಂದ ಸಂಜೆ 4ರ ವರೆಗೆ ನೆರಳಿನಲ್ಲಿ ಉಳಿದು ಕೆಲಸ ನಿರ್ವಹಿಸುವಂತೆ ಸಲಹೆ ನೀಡಿದರು. ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡುತ್ತಿರುವ ಹಿನ್ನಲೆಯಲ್ಲಿ ಆರೋಗ್ಯದಲ್ಲಿ ಏನಾದರೂ ವ್ಯತ್ಯಾಸ ಕಂಡುಬಂದರೆ ತಕ್ಷಣ ತಿಳಿಸಿ ವೈದ್ಯಕೀಯ ಸಲಹೆ ಪಡೆಯಬೇಕೆಂದರು.

ಇದೇ ಸಂದರ್ಭದಲ್ಲಿ ಚಿನ್ನಳ್ಳಿ ಗ್ರಾಮದಲ್ಲಿ 20 ಲಕ್ಷ ರೂ. ವೆಚ್ಚದಲ್ಲಿ ಅಂಬೇಡ್ಕರ್ ಭವನ ನಿರ್ಮಾಣ ಹಾಗು 1.10 ಕೋಟಿ ರೂ. ವೆಚ್ಚದಲ್ಲಿ ಚಿನ್ನಹಳ್ಳಿ-ಮಗ್ಗೆ ಸಂಪರ್ಕ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಧನಂಜಯ್, ಆಲೂರು-ಕಟ್ಟಾಯ ಮಂಡಲ ಬಿಜೆಪಿ ಪ್ರಧಾನ ಕಾರ್ಯದರ್ಶಿ ಅಬ್ಬನ ಕೃಷ್ಣಮೂರ್ತಿ, ಅಬ್ಬನ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಚಂದ್ರಶೆಟ್ಟಿ, ನಿರ್ದೇಶಕ ಸಂಪತ್, ಬಿಜೆಪಿ ಮುಖಂಡರಾದ ವಿರೂಪಾಕ್ಷ, ಯುವ ಮೋರ್ಚಾ ಅಧ್ಯಕ್ಷ ಗಣೇಶ್ ಸ್ನೇಹಜೀವಿ, ರವೀಂದ್ರ, ಚೇತನ್ ಹಾಗೂ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಮೇ-05

1862: ಮೆಕ್ಸಿಕೋದಲ್ಲಿ ಪುಯೆಬ್ಲಾ ಯುದ್ಧ ನಡೆದಿದ್ದು, ಫ್ರೆಂಚ್ ಸೇನೆಯ ವಿರುದ್ಧ ಮೆಕ್ಸಿಕೋ ಜಯ ಸಾಧಿಸಿತು

1949: ಯುರೋಪಿನ ಏಕತೆಗಾಗಿ ಕೌನ್ಸಿಲ್ ಆಫ್ ಯುರೋಪ್ ಸ್ಥಾಪನೆಯಾಯಿತು.

**ಜನನ**

1818: ಕಾರ್ಲ್ ಮಾರ್ಕ್ಸ್, ಜರ್ಮನ್ ತತ್ವಜ್ಞಾನಿ ಮತ್ತು ಆರ್ಥಿಕ ತಜ್ಞ

1988: ಅಡೇಲ್ ತಾರಾಬ್ಟ್, ಫುಟ್‌ಬಾಲ್ ಆಟಗಾರ

**ಮರಣ**

1821: ನೆಪೋಲಿಯನ್ ಬೋನಪಾರ್ಟ್ ಅವರು ಸೇಂಟ್ ಹೆಲೆನಾ ದ್ವೀಪದಲ್ಲಿ ನಿಧನರಾದರು

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248